

# ಕುಂಚದಲ್ಲಿ ನಿಸರ್ಗ!

■ ಬಳಕೂರು ವಿ.ಎಸ್. ನಾಯಕ



ಸುಧೀರ್ ಕುಮಾರ್

ಕಲಾವಿದನಿಗೆ ನಿಸರ್ಗವು ಒಂದಲ್ಲ ಒಂದು ರೀತಿಯಲ್ಲಿ ಪ್ರೇರಣೆಯಾಗುತ್ತದೆ. ನಿಸರ್ಗದಲ್ಲಿರುವ ಹಲವಾರು ವಿಚಾರಗಳು ಕಲಾವಿದನ ಕುಂಚದಲ್ಲಿ ಅರಳಿ ಕಲಾಕೃತಿಗಳಾಗಿ ಹೊರಹೊಮ್ಮುತ್ತವೆ. ಚಿತ್ರಕಲಾವಿದ ಹಾಗೂ ಶಿಕ್ಷಕ ಸುಧೀರ್ ಕುಮಾರ್ ಜಿ. ನಿಸರ್ಗದ ಸೊಬಗನ್ನು ಕ್ಯಾನ್ವಾಸ್‌ನಲ್ಲಿ ಅದ್ಭುತವಾಗಿ ಚಿತ್ರಿಸಿದ್ದಾರೆ.

ಮಂಗಳೂರಿನ ಸರ್ಕಾರಿ ಸಂಯುಕ್ತ ಪದವಿ ಪೂರ್ವ ಕಾಲೇಜಿನಲ್ಲಿ ಕಲಾ ಶಿಕ್ಷಕರಾಗಿರುವ ಇವರು ಪರಿಸರಪ್ರಿಯರು. ಹೀಗಾಗಿ ಪ್ರಕೃತಿಯ ಸೊಬಗು ಇವರ ಕುಂಚದಲ್ಲಿ ಒಡಮೂಡಿದೆ. ಕರಾವಳಿ ತೀರದಲ್ಲಿ ತಾವು ಕಂಡು ಅನುಭವಿಸಿದ ನಿಸರ್ಗದ ಅಂಶಗಳು ವರ್ಣಚಿತ್ರಗಳಾಗಿ ಹೊರಹೊಮ್ಮಿವೆ.

ಮಂಗಳೂರು ವೇಗವಾಗಿ ಬೆಳೆಯುವ ನಗರ. ಆದ್ದರಿಂದ ಇಲ್ಲಿಯ ಸುತ್ತಮುತ್ತಲಿನ ಹಳೆಯ ಕಟ್ಟಡಗಳೆಲ್ಲ ದೂರವಾಗಿ ನವನವೀನವಾದ ಮಂಗಳೂರು ನಗರ ಕಾಣುತ್ತಿದೆ. ಆಧುನಿಕ ಕಟ್ಟಡಗಳು ತಲೆಯೆತ್ತುತ್ತಿರುವ ಸಂದರ್ಭದಲ್ಲಿ ಹಳೆಯ ಗತವೈಭವವನ್ನು ಜತನವಾಗಿ ಕಾಪಿಡುವ ಉದ್ದೇಶದಿಂದ ಹಳೆಯ ಕಟ್ಟಡಗಳನ್ನು, ಅವುಗಳ ಸೌಂದರ್ಯವನ್ನು ತಮ್ಮ ಕಲಾಕೃತಿಗಳಲ್ಲಿ ಬಿಂಬಿಸಿದ್ದಾರೆ.

ಇವರ ಕಲಾಕೃತಿಗಳು ಒಂದಕ್ಕಿಂತ ಒಂದು ವಿಭಿನ್ನ; ವಿನೂತನ ವಿಚಾರಧಾರೆ ಹೊಂದಿದೆ. ಮಂಗಳೂರು ಸುತ್ತಮುತ್ತಲಿನ ಅನೇಕ ಚಹರೆಗಳನ್ನು ಚಿತ್ರಗಳಲ್ಲಿ ಬಿಂಬಿಸಿದ್ದಾರೆ. ಮಂಗಳೂರಿನ ಕಾಳಿಕಾಂಬಾ ರಸ್ತೆ, ಹಳೆಯ ಬಂದರು, ವೆಂಕಟರಮಣ ದೇವಾಲಯದ ಬೀದಿ, ಕ್ಲಾಕ್ ಟವರ್. ಭೈರವೇಶ್ವರ ದೇವಾಲಯ, ಸರ್ಕಾರಿ ಮಹಿಳಾ ಕಾಲೇಜು ಬಲ್ಮಠ, ಮಹಾಲಿಂಗೇಶ್ವರ ದೇವಸ್ಥಾನ ಗಾಂಧಿನಗರ, ಮಂಗಳೂರಿನ ಮಣ್ಣಗುಡ್ಡೆ, ತುಂಬೆ ನದಿಯ ತೀರ... ಹೀಗೆ ಎಲ್ಲ ಜಾಗಗಳನ್ನು ತಮ್ಮ ಜಲವರ್ಣ ಚಿತ್ರಗಳಲ್ಲಿ ಚಿತ್ರಿಸಿದ್ದಾರೆ.

ತಮ್ಮ ಕಲಾಕೃತಿಗಳ ಏಕವ್ಯಕ್ತಿ ಪ್ರದರ್ಶನ ನಡೆಸಿದ್ದಾರೆ. ತಮ್ಮ ಆಸಕ್ತಿಯನ್ನು ಶಾಲಾ ಮಕ್ಕಳಿಗೂ ಕಲಿಸುವ ಉದ್ದೇಶದಿಂದ ಹಲವಾರು ವಿದ್ಯಾರ್ಥಿಗಳಿಗೆ ಚಿತ್ರಕಲಾ ತರಬೇತಿಯನ್ನೂ ನೀಡುತ್ತಿದ್ದಾರೆ. ಈ ಮೂಲಕ ಸುಧೀರ್ ಅವರ ಚಿತ್ರಕಲಾ ಸೇವೆ ನಿರಂತರವಾಗಿ ಸಾಗಿದೆ. ■




ಶ್ರೀ ಪಂಚಮುಖಿ ಜ್ಯೋತಿಷ್ಯಂ

INDIA'S MOST POPULAR ASTROLOGER

ಪಂಡಿತ. ಶ್ರೀ ಗಣೇಶ್ ಕುಮಾರ್ ಶ್ರೀ ಶ್ರೀ ಹನುಮಾನ್ ಆರಾಧಕರು

ಕೇರಳ, ಕಲ್ಕತ್ತಾದ ಸಾವಿರಾರು ವರ್ಷಗಳ ಹಿಂದಿನ ಪ್ರಾಚೀನ ನಾಡಿಗ್ರಂಥ ಆಧಾರದಿಂದ ಸರ್ವಮಂತ್ರ ವಿದ್ಯೆ, ಜ್ಯೋತಿಷ್ಯ ಶಾಸ್ತ್ರ, ಪಂಚ ಮಹಾ ಗುರುಗಳ ಬೋಧನೆಯಿಂದ ಯೋಗ ಯಜ್ಞಗಳ ಮೂಲಕ ಸರ್ವ ವಿದ್ಯೆಯನ್ನು ತಮ್ಮ ವಶದಲ್ಲಿರಿಸಿಕೊಂಡಿರುವವರು. ಮದುವೆ, ಸಂತಾನ, ದಾಂಪತ್ಯ, ಗೃಹಶಾಂತಿ, ವಿದ್ಯೆ, ಆರೋಗ್ಯ, ವಿದೇಶ ಪ್ರಯಾಣ, ಹಣಕಾಸು, ವ್ಯಾಪಾರ, ಉದ್ಯೋಗ, ಕೋರ್ಟ್ ಕೇಸು, ಸಾಲಬಾಧೆ, ಇನ್ನಿತರ ನಿಮ್ಮ ಯಾವುದೇ ಕಠಿಣ ಸಮಸ್ಯೆಗಳಿಗೆ, ಸಲಹೆ ಮತ್ತು ಪರಿಹಾರಶತಸಿದ್ಧ.

600 ವರ್ಷ ಹಳೆಯ ಪಂಚಸಿದ್ಧಿ ತಂತ್ರಗಳಿಂದ ನಿಮ್ಮ ದುಶ್ಚಟ, ದೀರ್ಘಾವಧಿ, ಸಂತಾನ, ಸಮಸ್ಯೆಗಳಿಗೆ ಸನಾತನ ಪ್ರಕ್ರಿಯೆಗಳಿಂದ ಅತೀ ಶೀಘ್ರದಲ್ಲಿ ಸಮಗ್ರ ಪರಿಹಾರ ಕಲ್ಪಿಸುತ್ತಿರುವವರು.

ವಿ.ಸೂ.: ಇಲ್ಲಿ ಹೇಳುವ ವಿಷಯಗಳೆಲ್ಲವೂ ಗುಪ್ತವಾಗಿರುವುದರಿಂದ ನಿಮ್ಮ ಯಾವುದೇ ಸಮಸ್ಯೆಗಳನ್ನು ಹೇಳಲು ಹಿಂಜರಿಯಬೇಕಾಗಿಲ್ಲ. ದೂರವಾಣಿ ಹಾಗೂ ಪತ್ರದ ಮೂಲಕ ವಿವರಗಳನ್ನು ಪಡೆಯಬಹುದು.

ಸಮಸ್ಯೆ ಏನೇ ಇರಲಿ, ಎಷ್ಟೇ ಕಠಿಣವಾಗಿರಲಿ 600 ವರ್ಷಗಳ ಹಳೆಯ 108 ಜ್ಯೋತಿಷ್ಯ ತಂತ್ರಗಳಿಂದ ಮಹೋನ್ನತ ಪರಿಹಾರಗಳು.

ಬೆಂಗಳೂರು ಖಾಯಂ ಮನೆ ವಿಳಾಸ ನಂ.167/3, ಮೊದಲನೇ ಮಹಡಿ, 1ನೇ ಮುಖ್ಯರಸ್ತೆ, 9ನೇ ಅಡ್ಡರಸ್ತೆ, ಮುತ್ತುರಾಯಸ್ವಾಮಿ ದೇವಸ್ಥಾನದ ಹತ್ತಿರ, ಮೈಸೂರು ಸರ್ಕಲ್, (ಸಿರಸಿ ವೃತ್ತ), ಚಾಮರಾಜಪೇಟೆ, ಬೆಂಗಳೂರು–18.

9880444450